ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE 06/08/2020

# ಹೈಕೋರ್ಟ್‌ಗೆ ಶುಕ್ರವಾರ ರಜೆ

ವಿಶ್ವವಾಣಿ 6/8/20

**ಬೆಂಗಳೂರು :** ರಾಜ್ಯದಲ್ಲಿ ಕರೋನಾ ಸೋಂಕು ವ್ಯಾಪಿಸುತ್ತಿರುವ ಹಿನ್ನೆಲೆ ಸುರಕ್ಷತಾ ಕ್ರಮವಾಗಿ ಹೈಕೋರ್ಟ್‌ನ ಬೆಂಗಳೂರು ಪ್ರಧಾನ ಪೀಠದ ಎಲ್ಲ ಕಟ್ಟಡಗಳಿಗೆ ಸ್ಯಾನಿಟೈಸ್ ಮಾಡಲು ಆಗಸ್ಟ್ 7ರಂದು ರಜೆ ನೀಡಿ ಹೈಕೋರ್ಟ್ ಆದೇಶಿಸಿದೆ. ಈ ಕುರಿತು ಹೈಕೋರ್ಟ್ ನ್ಯಾಯಾಂಗ ರಿಜಿಸ್ಟ್ರಾರ್ ಕೆ.ಎಸ್ .ಭರತ್ ಕುಮಾರ್ ಮಾಹಿತಿ ನೀಡಿದ್ದು, ಮುಂದಿನ ಶುಕ್ರವಾರ (ಆ.7) ಹೈಕೋರ್ಟ್‌ನ ಸಂಪೂರ್ಣ ಕಟ್ಟಡಗಳನ್ನು ಸ್ಯಾನಿಟೈಸ್ ಮಾಡಲಾಗುತ್ತದೆ. ಅದಕ್ಕಾಗಿ ಮುಖ್ಯ ನ್ಯಾಯಮೂರ್ತಿಗಳ ಪೀಠದ ಮುಂದೆ ಶುಕ್ರವಾರಕ್ಕೆ ನಿಗದಿಯಾಗಿದ್ದ ಪ್ರಕರಣಗಳ ವಿಚಾರಣೆಯನ್ನು ಒಂದು ದಿನ ಮುಂಚಿತವಾಗಿ ಗುರುವಾರವೇ ನಡೆಸಲಾಗುತ್ತದೆ ಎಂದು ತಿಳಿಸಿದ್ದಾರೆ. ಬೆಂಗಳೂರು ಪ್ರಧಾನ ಪೀಠದ 45 ಸಿಬ್ಬಂದಿಗೆ ಕರೋನಾ ಸೋಂಕು ದೃಢಪಟ್ಟಿದೆ. ಮತ್ತೆ ಕೆಲವರ ಪರೀಕ್ಷಾ ವರದಿ ಬರಬೇಕಿದೆ. ಈ ಹಿನ್ನೆಲೆ ಸುರಕ್ಷತಾ ಕ್ರಮವಾಗಿ ಇಡೀ ಕೋರ್ಟ್ ಸಂಕೀರ್ಣವನ್ನು ಸಂಪೂರ್ಣವಾಗಿ ಸ್ಯಾನಿಟೈಸ್ ಮಾಡಲು ಹೈಕೋರ್ಟ್ ಮುಂದಾಗಿದೆ.